# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ರಾಷ್ಟ್ರೀಯ ಶಿಕ್ಷಣ ನೀತಿ 2020 ರಡಿಯಲ್ಲಿ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ವರ್ಗಾವಣೆ/ ಬಹು ಆಗಮನ/ಬಹು ನಿರ್ಗಮನದ ಬಗ್ಗೆ - ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ :ಇಡಿ 260 ಯುಎನ್ಇ 2019 (ಭಾಗ-1) ದಿನಾಂಕ: 07-08-2021.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 35 ಇಜಿಒವಿ 2020, ದಿನಾಂಕ: 04-08-2020.
3. ಸರ್ಕಾರದ ಆದೇಶ ಸಂಖ್ಯೆ:ಇಡಿ 35 ಇಜಿಒವಿ 2020, ದಿನಾಂಕ: 23-11-2020.
4. ಸರ್ಕಾರದ ಆದೇಶ ಸಂಖ್ಯೆ:ಇಡಿ 35 ಇಜಿಒವಿ 2021, ದಿನಾಂಕ: 27-07-2021.

*******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ: (1)ರ ಸರ್ಕಾರದ ಆದೇಶದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿಯ ವಿಶ್ವವಿದ್ಯಾಲಯಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ಅನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ಸರ್ಕಾರದ ಆದೇಶದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು ಮತ್ತು ಅವುಗಳ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಲ್ಲಿ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ವ್ಯವಸ್ಥೆಯನ್ನು (UUCMS) ಷರತ್ತಿಗೊಳಪಟ್ಟು ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ ಇ-ಆಡಳಿತ ಇಲಾಖೆಯ Centre for smart Governance ಸಹಯೋಗದೊಂದಿಗೆ UUCMS ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ UUCMS ತಂತ್ರಾಂಶ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮತ್ತು ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು ಮತ್ತು ಅವುಗಳ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಲ್ಲಿ ಮತ್ತು Centre for smart Governance ಗಳ ನಡುವೆ ಸಮನ್ವಯತೆಯನ್ನು ಏರ್ಪಡಿಸಲು ರಚನೆ ಮತ್ತು ಜವಾಬ್ದಾರಿ ಹೊಂದಿರುವ UUCMS – ರಾಜ್ಯ ಯೋಜನಾ ನಿರ್ವಹಣಾ ಘಟಕವನ್ನು (UUCMS - SPMU) ಮತ್ತು ವಿಶ್ವವಿದ್ಯಾಲಯ ಹಾಗೂ ಕಾಲೇಜುಗಳಲ್ಲಿ ಇ-ಆಡಳಿತ ಘಟಕಗಳನ್ನು ಸ್ಥಾಪಿಸಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಮೂಲಕ ನಿರ್ವಹಿಸಲು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಸರ್ಕಾರದ ಆದೇಶದಲ್ಲಿ 2021-22ನೇ ಸಾಲಿನಿಂದಲೇ ಉನ್ನತ ಶಿಕ್ಷಣ ಇಲಾಖೆಯಡಿಯ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು ಮತ್ತು ಅವುಗಳ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯು ಇ-ಆಡಳಿತ ಇಲಾಖೆಯ Centre for smart Governance ರವರ ಸಹಯೋಗದೊಂದಿಗೆ ಅಭಿವೃದ್ಧಿ ಪಡಿಸಿರುವ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ವ್ಯವಸ್ಥೆಯ (UUCMS) ತಂತ್ರಾಂಶದ ಎಲ್ಲಾ module ಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಮತ್ತು ಯಾವುದೇ ಹೊಸ ತಂತ್ರಾಂಶ ಖರೀದಿ, ಅಭಿವೃದ್ಧಿ ಮತ್ತು ಲೈಸೆನ್ಸ್ ನವೀಕರಣಗಳನ್ನು ಕೈಗೆತ್ತಿಕೊಳ್ಳಬಾರದೆಂದು ಆದೇಶಿಸಲಾಗಿತ್ತು.



3/3/23

3/3/2023

ಹೊಸ ಶಿಕ್ಷಣ ನೀತಿ -2020ರಡಿಯಲ್ಲಿ ಪ್ರಾರಂಭಿಸಲಾದ ಪದವಿ ಮತ್ತು ಸ್ನಾತಕೋತ್ತರ ಪದವಿಗಳಿಗೆ ಅನ್ವಯವಾಗುವಂತೆ, Admission, Academic and Exam Module ಗಳನ್ನು ವಿಶ್ವವಿದ್ಯಾಲಯಗಳಲ್ಲಿ ಬಳಕೆಗೆ 2020-2021 ರಿಂದ ಒದಗಿಸಲಾಗಿದೆ ಹಾಗೂ 2022-2023ನೇ ಸಾಲಿನಲ್ಲಿಯೂ NEP – 2020 ರಡಿಯಲ್ಲಿ ಪ್ರವೇಶಾತಿ ಪಡೆದ, ಪದವಿ ಹಾಗೂ Non – NEP ರಡಿಯ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ Admission, Academic and Examination ಕಾರ್ಯಗಳನ್ನು UUCMS ತಂತ್ರಾಂಶದ ಯಶಸ್ವಿಯಾಗಿ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಬಳಸಲಾಗುತ್ತಿದೆ.

NEP -2020 ರಡಿಯಲ್ಲಿ ಪ್ರವೇಶಾತಿ ಪಡೆದ ನಂತರ, ವಿದ್ಯಾರ್ಥಿಯು ಯಾವುದೇ ಸಮಯದಲ್ಲಿ ಒಂದು ವಿಶ್ವವಿದ್ಯಾಲಯದಿಂದ ಇನ್ನೊಂದು ವಿಶ್ವವಿದ್ಯಾಲಯಕ್ಕೆ ವರ್ಗಾವಣೆ / ಬಹು ಆಗಮನ / ಬಹು ನಿರ್ಗಮನಕ್ಕೆ ಅವಕಾಶವಿರುತ್ತದೆ. ಈ ಹಿನ್ನೆಲೆಯಲ್ಲಿ, ಪ್ರಸ್ತುತ, ವಿದ್ಯಾರ್ಥಿಗಳು ಒಂದು ವಿಶ್ವವಿದ್ಯಾಲಯದ ಕಾಲೇಜಿನಿಂದ ಇನ್ನೊಂದು ವಿಶ್ವವಿದ್ಯಾಲಯದ ಕಾಲೇಜಿಗೆ ವರ್ಗಾವಣೆ / ಬಹು ಆಗಮನ / ಬಹು ನಿರ್ಗಮನಕ್ಕೆ ಅವಕಾಶ ಕೋರಿದಾಗ, ಅನುಷ್ಠನದಲ್ಲಿ ಅನುಸರಿಸಬೇಕಾದ ಕ್ರಮಗಳು NEP ಯ multi entry and multi exit ಅನ್ನು ಅನುಷ್ಠಾನಗೊಳಿಸಲು ಅನುಸರಿಸಬೇಕಾದ ಕ್ರಮಗಳು, ವಿದ್ಯಾರ್ಥಿಯು MOOCS ಅಥವಾ ಕಾಲೇಜು / ವಿಶ್ವವಿದ್ಯಾಲಯದಿಂದ ಹೊರಗೆ ವಿಷಯವಾರು credit ಗಳಿಸಿದ್ದರೆ ಆ credit ಗಳನ್ನು ಪರಿಗಣಿಸಬೇಕಾದ ವಿಧಿವಿಧಾನಗಳು, ವಿದ್ಯಾರ್ಥಿಗಳು credit ಅನ್ನು consolidate ಮಾಡಿ ಪದವಿ ವಿತರಣೆಯ ವಿಧಾನ, Provide certificate after successful completion of first year, diploma after successful completion of second year and degree after third year ಗಳನ್ನು ನೀಡಲು ಅನುಸರಿಸಬೇಕಾದ ವಿಧಾನ, ಒಂದೇ ವಿದ್ಯಾರ್ಥಿಯು ಏಕ ಕಾಲದಲ್ಲಿ ಬಹು ಪದವಿಗಳನ್ನು ಪಡೆಯಲು ಅನುಸರಿಸಬೇಕಾದ ಕ್ರಮಗಳು, ಮುಂತಾದವುಗಳ ಬಗ್ಗೆ ಪ್ರಸ್ತುತ ಜಾರಿಯಲ್ಲಿರುವ ನಿಯಮಗಳು, ಲಭ್ಯವಿರುವ UGC ಹಾಗೂ NEP ಮಾರ್ಗದರ್ಶಿಗಳನ್ನು ಉಲ್ಲೇಖಿಸಿ ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತು ನೀಡಿರುವ ಅಭಿಪ್ರಾಯದ ಹಿನ್ನೆಲೆಯಲ್ಲಿ, ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 27 ಇಜಿಒವಿ2022,**
**ಬೆಂಗಳೂರು, ದಿನಾಂಕ:28-02-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ರಾಷ್ಟ್ರೀಯ ಶಿಕ್ಷಣ ನೀತಿ -2020 ರಡಿಯಲ್ಲಿ 2020-21 ನೇ ಸಾಲಿನಿಂದ ಪ್ರವೇಶಾತಿ ಪಡೆದ ಪದವಿ ಹಾಗೂ ಸ್ನಾತ್ರಕೋತ್ತರ ಪದವಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಾಗೂ ಸಾರ್ವಜನಿಕ ವಿಶ್ವವಿದ್ಯಾಲಯಕ್ಕೆ ಸಂಯೋಜಿತಗೊಂಡಿರುವ ಎಲ್ಲಾ ಕಾಲೇಜುಗಳು ಮತ್ತು ಸ್ವಾಯತ್ತ ಕಾಲೇಜುಗಳು ಈ ಕೆಳಗಿನ ಅಂಶಗಳಂತೆ ಕ್ರಮವಹಿಸುವಂತೆ ಆದೇಶಿಸಿದೆ.

1. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪದವಿ ಮತ್ತು ಸ್ನಾತ್ರಕೋತ್ತರ ತರಗತಿಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಯು ಹಾಲಿ ವಿಶ್ವವಿದ್ಯಾಲಯದ ಒಂದು ಸಂಯೋಜಿತ ಕಾಲೇಜಿನಿಂದ ಅದೇ ವಿಶ್ವವಿದ್ಯಾಲಯದ ಇನ್ನೊಂದು ಸಂಯೋಜಿತ ಕಾಲೇಜಿಗೆ ವರ್ಗಾವಣೆ ಬಯಸಿದಲ್ಲಿ, ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಬೆಸ ಸಂಖ್ಯೆಯ ಸೆಮಿಸ್ಟರ್‌ಗಳಿಗೆ UUCMS ತಂತ್ರಾಂಶ ಬಳಸಿಕೊಂಡು ವರ್ಗಾವಣೆಗೊಳ್ಳಲು ಅವಕಾಶ ಕಲ್ಪಿಸಿಕೊಡುವುದು ಹಾಗೂ ಪಾಸಾಗದೇ ಉಳಿದ ವಿಷಯಗಳನ್ನು ವರ್ಗಾವಣೆಗೊಂಡ ಕಾಲೇಜಿನಲ್ಲಿಯೇ ಮುಂದುವರೆಸಲು ಅವಕಾಶ ಕಲ್ಪಿಸಿಕೊಡುವುದು.

2. ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ತರಗತಿಗಳಲ್ಲಿ ಅಧ್ಯಯನ ಮಾಡುತ್ತಿರುವ ಒಂದು ವಿಶ್ವವಿದ್ಯಾಯದ ಸಂಯೋಜಿತ ಕಾಲೇಜಿನಿಂದ ರಾಜ್ಯದೊಳಗಿನ ಇನ್ನೊಂದು ಸಾರ್ವಜನಿಕ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜಿಗೆ ವರ್ಗಾವಣೆ ಬಯಸಿದಲ್ಲಿ ವರ್ಗಾವಣೆಗೆ UUCMS ತಂತ್ರಾಂಶ ಬಳಸಿಕೊಂಡು ವರ್ಗಾವಣೆಗೊಳ್ಳಲು ಅವಕಾಶ ಕಲ್ಪಿಸಿಕೊಡುವುದು ಹಾಗೂ ಪಾಸಾಗದೇ ಉಳಿದ ವಿಷಯಗಳನ್ನು ವರ್ಗಾವಣೆಗೊಂಡ ಕಾಲೇಜಿನಲ್ಲಿಯೇ ಮುಂದುವರೆಸಲು ಅವಕಾಶ ಕಲ್ಪಿಸಿಕೊಡುವುದು
3. NEP-2020 ರಡಿಯ, Multi entry and Multi exit ಅವಕಾಶದಡಿಯಲ್ಲಿ ನಿಗಿದಿತ credit ಗಳನ್ನು ಸಂಪಾದಿಸಿ ಪ್ರಥಮ ವರ್ಷ (ಎರಡು ಸೆಮಿಸ್ಟರ್) ಪೂರ್ಣಗೊಳಿಸಿ ಅಧ್ಯಯನವನ್ನು ನಿಲ್ಲಿಸಿದ ವಿಧ್ಯಾರ್ಥಿಗೆ UG Certificate, ನಿಗಿದಿತ credit ಗಳನ್ನು ಸಂಪಾದಿಸಿ ದ್ವಿತೀಯ ವರ್ಷ ( ನಾಲ್ಕು ಸೆಮಿಸ್ಟರ್) ಪೂರ್ಣಗೊಳಿಸಿ ಅಧ್ಯಯನವನ್ನು ನಿಲ್ಲಿಸಿದ ವಿಧ್ಯಾರ್ಥಿಗೆ UG Diploma Certificate ಹಾಗೂ ನಿಗಿದಿತ credit ಗಳನ್ನು ಸಂಪಾದಿಸಿ ತೃತೀಯ ವರ್ಷ ( ಆರು ಸೆಮಿಸ್ಟರ್) ಪೂರ್ಣಗೊಳಿಸಿ ಅಧ್ಯಯನವನ್ನು ನಿಲ್ಲಿಸಿದ ವಿಧ್ಯಾರ್ಥಿಗೆ Undergraduate degrees ಗಳನ್ನು ನೀಡುವುದು. ನಾಲ್ಕನೇ ವರ್ಷ ಪೂರ್ಣಗೊಳಿಸಿದ ವಿಧ್ಯಾರ್ಥಿಗೆ Undergraduate degrees (Hons) ನೀಡುವುದು ಹಾಗೂ Multi exit option ಮುಖಾಂತರ ಹೊರಹೋದ ವಿದ್ಯಾರ್ಥಿಯು ಪ್ರಥಮ ಸೆಮಿಸ್ಟರ್‌ಗೆ ಪ್ರವೇಶಾತಿ ಪಡೆದ 7 ವರ್ಷಗಳೊಳಗೆ, NEP-2020 ರಡಿಯ Multi entry ಅವಕಾಶ ಬಳಸಿಕೊಂಡು ಪುನಃ ಪ್ರವೇಶ ಪಡೆದು ಅಧ್ಯಯನ ಮುಂದುವರೆಸಬಹುದು.
4. ಅಧಿಕೃತ MOOCS ವ್ಯವಸ್ಥೆಯ ಮುಖಾಂತರ ವಿದ್ಯಾರ್ಥಿಯು ಪಡೆದ credit points ಗಳನ್ನು, Academic Bank of Credit (ABC) ನ ಖಾತೆಯೊಂದಿಗೆ ಸಂಯೋಜಿಸುವುದು, ಸದರಿ credit points ಗಳನ್ನು, ಸದರಿ ವಿದ್ಯಾರ್ಥಿಗೆ ಸೂಕ್ತ ಪ್ರಮಾಣ ಪತ್ರಗಳನ್ನು ನೀಡಲು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಪರಿಗಣಿಸುವುದು.
5. ಯುಜಿಸಿ ನಿಯಮಾವಳಿಗಳಲ್ಲಿ ಸೂಚಿಸಿರುವಂತೆ, ಒಬ್ಬ ವಿದ್ಯಾರ್ಥಿಯು ಏಕಕಾಲದಲ್ಲಿ ಬಹು ಪದವಿಗಳನ್ನು ಪಡೆಯಲು ಅವಕಾಶವಿದ್ದು, ವಿದ್ಯಾರ್ಥಿಯು ಹಾಜರಾತಿಯನ್ನು ಖಚಿತಪಡಿಸಿಕೊಂಡು ಎರಡು ಪದವಿಗಳಲ್ಲಿ ಅಧ್ಯಯನ ಮಾಡಲು ಅವಕಾಶ ಕಲ್ಪಿಸಿಕೊಡುವುದು.

ಈ ಮೇಲಿನ ಎಲ್ಲಾ ಅಂಶಗಳನ್ನು UUCMS ತಂತ್ರಾಂಶದ ಮುಖಾಂತರ ಕಡ್ಡಾಯವಾಗಿ ನಿರ್ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ನಂದಕುಮಾರ್ ಬಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

ಇವರಿಗೆ:

1. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
2. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿ ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-560 001.

4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
5. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತ್, ಬೆಂಗಳೂರು.
6. ಕುಲಸಚಿವರು (ಆಡಳಿತ), ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು.
7. ಕುಲಸಚಿವರು (ಮೌಲ್ಯಮಾಪನ), ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು.
8. ಕಾರ್ಯ ನಿರ್ವಾಹಕ ನಿರ್ದೇಶಕರು, ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್, ಬೆಂಗಳೂರು – UUCMS ತಂತ್ರಾಂಶದಲ್ಲಿ ಅಳವಡಿಸುವುದು.
9. ಉಪ ಕಾರ್ಯದರ್ಶಿ(ವಿಶ್ವವಿದ್ಯಾಲಯಗಳು), ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಪ್ರಾಂಶುಪಾಲರು, ರಾಜ್ಯದ ಸರ್ಕಾರಿ / ಅನುದಾನಿತ ಪ್ರಥಮ ದರ್ಜೆ ಪದವಿ ಕಾಲೇಜುಗಳು ಮತ್ತು ಸ್ನಾತಕೋತ್ತರ ಕಾಲೇಜುಗಳು.
11. ಪ್ರಾಂಶುಪಾಲರು, ರಾಜ್ಯದ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು/ ಪಾಲಿಟೆಕ್ನಿಕ್ ಗಳು.
12. ಇ-ಸಮ್ವಯಾಧಿಕಾರಿ, ಇ-ಆಡಳಿತ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿಯನ್ನು-ಮಾಹಿತಿಗಾಗಿ:**

1. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಸಿ.ಆ.ಸು ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.